# Akashvani : Bangalore
# Regional Bulletin In Kannada
# 13.04.2024 / 18.40 hrs

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

**13.04.2024 / 18.40 hrs**

ಮುಖ್ಯಾಂಶಗಳು

೧. ಸಾರ್ವತ್ರಿಕ ಚುನಾವಣೆ - ರಾಜ್ಯದಲ್ಲಿ ಇಂದಿನಿಂದ ಹಿರಿಯನಾಗರಿಕರು ಹಾಗೂ ವಿಶೇಷಚೇತನರಿಗೆ ಮನೆ ಮತದಾನ

೨. ಲೋಕಸಭಾ ಚುನಾವಣೆಯಲ್ಲಿ ಉತ್ತಮ ಮತದಾನಕ್ಕೆ ಕ್ರಮ - ಚುನಾವಣಾ ಆಯೋಗದಿಂದ ಜನಜಾಗೃತಿ

೩. ನಾಳೆ ಕರಾವಳಿಯಲ್ಲಿ ಬಿಜೆಪಿ ಹಿರಿಯ ನಾಯಕ ಪ್ರಧಾನಿ ನರೇಂದ್ರ ಮೋದಿ ಬಿರುಸಿನ ಪ್ರಚಾರ- ಮೈಸೂರಿನಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಮತಯಾಚನೆ

೪. ರಾಜ್ಯದೆಲ್ಲೆಡೆ ದೇವರ ದಾಸಿಮಯ್ಯ ಜಯಂತಿ ಆಚರಣೆ

<><*<><>*><>

೨೦೨೪ರ ಲೋಕಸಭಾ ಚುನಾವಣೆಯಲ್ಲಿ ಭಾರತದ ಚುನಾವಣಾ ಆಯೋಗ ಮೊದಲ ಬಾರಿಗೆ ವೃದ್ಧರು ಮತ್ತು ಅಂಗವಿಕಲರಿಗೆ ಮನೆ ಮತದಾನದ ಸೌಲಭ್ಯವನ್ನು ಒದಗಿಸಿದೆ. ೮೫ ವರ್ಷ ಮೇಲ್ಪಟ್ಟ ಮತದಾರರು, ವಿಶೇಷಚೇತನರು ಐಚ್ಛಿಕ ಮನೆ ಮತದಾನ ಸೌಲಭ್ಯವನ್ನು ಪಡೆಯಬಹುದು. ರಾಜ್ಯದಲ್ಲಿ ಮೊದಲ ಹಂತದ ೧೪ ಕ್ಷೇತ್ರಗಳಲ್ಲಿ ಈ ವರ್ಗದ ಮತದಾರರು ಇಂದಿನಿಂದ ತಮ್ಮ ಮತಗಳನ್ನು ಚಲಾಯಿಸಲು ಆರಂಭಿಸಿದ್ದಾರೆ. ಇವರು ಮನೆಯಿಂದಲೇ ಅಂಚೆ ಮೂಲಕ ಮತದಾನ ಮಾಡಲಿದ್ದಾರೆ. ಈ ತಿಂಗಳ ೧೮ವರೆಗೆ ಒಟ್ಟು ೬ ದಿನ ಮತದಾನಕ್ಕೆ ಅವಕಾಶ ಕಲ್ಪಿಸಲಾಗಿದೆ. ಅಧಿಕಾರಿಗಳ ತಂಡ ಪ್ರತಿ ಮತದಾರರ ಮನೆಗೆ ತೆರಳಿ ಅಂಚೆ ಮತದಾನ ಪಡೆಯಲಿದ್ದಾರೆ.

<><*<><>*><>

ಚಿತ್ರದುರ್ಗ ಜಿಲ್ಲೆಯಲ್ಲಿ ೮೫ವರ್ಷ ಮೇಲ್ಪಟ್ಟ ಹಿರಿಯ ನಾಗರಿಕರು ಮನೆಯಿಂದಲೇ ಮತದಾನ ಮಾಡುವ ಪ್ರಕ್ರಿಯೆಯು ಹೊಳಲ್ಕೆರೆ ಪಟ್ಟಣದಲ್ಲಿ ಆರಂಭವಾಗಿದೆ. ತಾಲೂಕಿನ ೨೪೬ ಮಂದಿ ಮನೆಯಿಂದ ಮತದಾನ ಮಾಡಲು ನೋಂದಣಿ ಮಾಡಿಕೊಂಡಿದ್ದಾರೆ. ಮಂಡ್ಯ ಲೋಕಸಭಾ ಚುನಾವಣೆ ಅಂಗವಾಗಿ ಈಗಾಗಲೇ ಗುರುತಿಸಲಾಗಿರುವ ಅಗತ್ಯ ಸೇವಾ ವಲಯದ ಮತದಾರರಿಗೆ ವಿಶ್ವವಿದ್ಯಾನಿಲಯದ ಕಲಾ ವಿಭಾಗದಲ್ಲಿ ಇದೇ ೧೯, ೨೦ ಹಾಗೂ ೨೧ರಂದು ಅಂಚೆ ಮತದಾನ ಕೇಂದ್ರ ತೆರೆಯಲಾಗುವುದು ಎಂದು ಜಿಲ್ಲಾಧಿಕಾರಿ ಡಾ. ಕುಮಾರ ತಿಳಿಸಿದ್ದಾರೆ. ಬೆಂಗಳೂರು ಗ್ರಾಮಾಂತರ ಜಿಲ್ಲೆಯ ೪ ವಿಧಾನಸಭಾ ಕ್ಷೇತ್ರಗಳಲ್ಲಿ ಮನೆ ಮತದಾನಕ್ಕೆ ಆಯ್ಕೆ ಮಾಡಿಕೊಳ್ಳಲಾದ ೮೫ ವರ್ಷ ಮೇಲ್ಪಟ್ಟ ಹಿರಿಯ ಹಾಗೂ ವಿಶೇಷಚೇತನ ಮತದಾರರಿಗೆ ಇದೇ ೧೮ ರವರೆಗೆ ನಡೆಯಲಿರುವ ಮನೆ ಮತದಾನ ಕಾರ್ಯಕ್ಕೆ ಚಾಲನೆ ನೀಡಲಾಯಿತು. ಜಿಲ್ಲೆಯಲ್ಲಿ ಮತದಾನಕ್ಕೆ ನೋಂದಾಯಿಸಿಕೊಂಡಿರುವ ೮೫ ವರ್ಷ ಮೇಲ್ಪಟ್ಟವರು ೫೧೨ ಮತದಾರರು ಹಾಗೂ ೨೨೫ ವಿಶೇಷಚೇತನರು ಮತದಾರರಿದ್ದಾರೆ.

<><*<><>*><>

ನೈರುತ್ಯ ರೈಲ್ವೆ ಹಾಗೂ ಹುಬ್ಬಳ್ಳಿ-ಧಾರವಾಡ ಮಹಾನಗರ ಪಾಲಿಕೆ ಸಂಯುಕ್ತಾಶ್ರಯದಲ್ಲಿ ವಿವಿಧ ಸ್ವೀಪ್ ಚಟುವಟಿಕೆ ಹಮ್ಮಿಕೊಳ್ಳಲಾಗಿತ್ತು. ಅದರಲ್ಲಿ' ಕಡಿಮೆ ವೋಟರ್ ಟರ್ನೌಟ್' ಪೋಲಿಂಗ್ ಪ್ರದೇಶಗಳಲ್ಲಿ ಉತ್ತಮ ಮತದಾನ ಸಾಧಿಸುವ ಅಂಗವಾಗಿ ಹಮ್ಮಿಕೊಂಡಿದ್ದ ಅಭಿಯಾನದಲ್ಲಿ, ಮತದಾನ ಜಾಗೃತಿ ಮೂಡಿಸಲಾಯಿತು. ಹುಬ್ಬಳ್ಳಿ ಧಾರವಾಡ ಮಹಾನಗರ ಪಾಲಿಕೆಯ ಆಯುಕ್ತ ಈಶ್ವರ್ ಉಳ್ಳಾಗಡ್ಡಿ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು.

ಮತದಾನ ಜಾಗೃತಿ ಅಂಗವಾಗಿ ದಾವಣಗೆರೆಯಲ್ಲಿ ಸಾಂಸ್ಕೃತಿಕ ಸಂಜೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಜಿಲ್ಲಾ ಸ್ವೀಪ್ ಸಮಿತಿ ಅಧ್ಯಕ್ಷ ಸುರೇಶ್ ಇಟ್ನಾಳ್ ಹೇಳಿದ್ದಾರೆ. ಕಳೆದ ಚುನಾವಣೆಯಲ್ಲಿ ಶೇಕಡ ೭೨.೯೬ ರಷ್ಟು ಮತದಾನವಾಗಿತ್ತು. ಈ ಬಾರಿ ಶೇಕಡ ೮೫ ರಷ್ಟು ಮತದಾನದ ಗುರಿಯೊಂದಿಗೆ ವಿವಿಧ ರೀತಿಯ ಮತದಾನ ಜಾಗೃತಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ತಿಳಿಸಿದರು.

ಬಾಗಲಕೋಟೆಯಲ್ಲಿ ಲೋಕಸಭಾ ಚುನಾವಣೆಯನ್ನು ಮುಕ್ತ, ನ್ಯಾಯಸಮ್ಮತ ಹಾಗೂ ಪಾರದರ್ಶಕವಾಗಿ ನಡೆಸಲು ಅಧಿಕಾರಿಗಳು ಎಲ್ಲ ರೀತಿಯಿಂದ ಸನ್ನದ್ಧರಾಗಬೇಕೆಂದು ಚುನಾವಣಾ ವೆಚ್ಚ ವೀಕ್ಷಕ ಇಫ್ತಖಿರ ಅಹಮ್ಮದ್ ಚೌದರಿ ಕರೆ ನೀಡಿದ್ದಾರೆ.

ವಿಜಯನಗರ ಜಿಲ್ಲೆಯ ಮೇ ೭ ರಂದು ನಡೆಯಲಿರುವ ಲೋಕಸಭಾ ಚುನಾವಣೆಯಲ್ಲಿ ಪ್ರತಿಯೊಬ್ಬರೂ ತಪ್ಪದೇ ಮತದಾನ ಮಾಡಬೇಕೆಂದು ನರೇಗಾ ಕೂಲಿ ಕಾರ್ಮಿಕರಿಗೆ ಚುನಾವಣಾಧಿಕಾರಿ ತಿಳಿಸಿದರು.

ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೇವನಹಳ್ಳಿ ಪಟ್ಟಣದಲ್ಲಿ ಪೊಲೀಸ್ ಮತ್ತು ಅರೇಸೇನಾ ಪಡೆ ಪಥಸಂಚಲನ ನಡೆಸಿ, ಮತದಾರರಿಗೆ  ಮತದಾನ ಮಾಡಲು ಈಶಾನ್ಯ ವಿಭಾಗದ ಉಪ ಅಧೀಕ್ಷಕರಾದ ಲಕ್ಷ್ಮಿ ಪ್ರಸಾದ್ ಕರೆ ನೀಡಿದ್ದಾರೆ.

ಮತದಾನ ಜಾಗೃತಿ ಕಾರ್ಯಕ್ರಮಗಳನ್ನು ಮತ್ತಷ್ಟು ಪರಿಣಾಮಕಾರಿಯಾಗಿ ಹಮ್ಮಿಕೊಳ್ಳಲು ಇದೇ ತಿಂಗಳ ೨೧ರಂದು ಚಾಮರಾಜನಗರ ಜಿಲ್ಲೆಯ ಎಲ್ಲಾ ಮತಗಟ್ಟೆಗಳಲ್ಲಿ ವಾಕಥಾನ್ ಏರ್ಪಡಿಸುವಂತೆ  ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಆನಂದ್ ಪ್ರಕಾಶ್ ಮೀನಾ ಮತಗಟ್ಟೆ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.  ಇದೇ ೨೬ರಂದು ಬೆಳಿಗ್ಗೆ ೫ ರಿಂದ ರಾತ್ರಿ ೮ ಗಂಟೆಯವರೆಗೆ ಜಿಲ್ಲಾ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಪ್ರದೇಶಗಳಲ್ಲಿ ಸಂತೆ ಮತ್ತು ಜಾತ್ರೆಗಳನ್ನು ನಿಷೇಧಿಸಿ ಜಿಲ್ಲಾ ಚುನಾವಣಾಧಿಕಾರಿ ಶಿಲ್ಪಾ ನಾಗ್  ಆದೇಶಿಸಿದ್ದಾರೆ.

ಚಿಕ್ಕಬಳ್ಳಾಪುರ ಲೋಕಸಭಾ ಕ್ಷೇತ್ರ ವ್ಯಾಪ್ತಿಯ ಎಂಟು ವಿಧಾನಸಭಾ ಕ್ಷೇತ್ರಗಳ ವ್ಯಾಪ್ತಿಯಲ್ಲಿ ೮೫ ವರ್ಷ ಮೇಲ್ಪಟ್ಟ ಹಿರಿಯ ನಾಗರಿಕರು ಹಾಗೂ ವಿಶೇಷಚೇತನರ ಮನೆ ಮತದಾನ ಇಂದಿನಿಂದ ೧೮ರವರೆಗೆ ನಡೆಯಲಿದೆ. ಮನೆಯಿಂದಲೇ ಮತದಾನಕ್ಕೆ ಕೋರಿ ೮೫ ವರ್ಷ ಮೇಲ್ಪಟ್ಟ ೧ ಸಾವಿರದ ೬೩೯ ಹಿರಿಯ ನಾಗರಿಕ ಮತದಾರರು ಹಾಗೂ ೭೬೩ ವಿಶೇಷ ಚೇತನ ಮತದಾರರು ಮನವಿ ಮಾಡಿದ್ದಾರೆ ಎಂದು ಚುನಾವಣಾಧಿಕಾರಿ ಪಿ.ಎನ್.ರವೀಂದ್ರ ತಿಳಿಸಿದ್ದಾರೆ.

ಕೊಡಗು ಜಿಲ್ಲೆಯಲ್ಲಿ ಶಾಂತಿಯುತವಾಗಿ ಲೋಕಸಭಾ ಚುನಾವಣೆ  ನಡೆಸುವ ಸಂಬಂಧ  ಇದೇ ೨೪ ರಿಂದ ೨ ದಿನಗಳ ಕಾಲ ಸಂಜೆ ೫ ಗಂಟೆವರೆಗೆ ಜಿಲ್ಲೆಯಾದ್ಯಂತ  ನಿಷೇಧಾಜ್ಞೆ ಜಾರಿಗೊಳಿಸಿ  ಜಿಲ್ಲಾಧಿಕಾರಿ ರಾಜಾ ಆದೇಶ ಹೊರಡಿಸಿದ್ದಾರೆ.

ಲೋಕಸಭಾ ಚುನಾವಣೆಗಾಗಿ ಅಭ್ಯರ್ಥಿಗಳ  ಖರ್ಚು ವೆಚ್ಚದ ಮೇಲೆ ತೀವ್ರ ನಿಗಾ ಇಡಬೇಕು ಎಂದು ವಿಜಯಪುರ ಲೋಕಸಭಾ ಚುನಾವಣಾ ವೆಚ್ಚ ವೀಕ್ಷಕ ಅನುಪಕುಮಾರ್ ಸೂಚಿಸಿದ್ದಾರೆ.  ಚೆಕ್‌ಪೋಸ್ಟ್ ಕಾಟಾಚಾರಕ್ಕೆ ಮಾಡಿದಂತೆ ತಪಾಸಣೆಯಾಗಬಾರದು. ಕಟ್ಟುನಿಟ್ಟಾಗಿ ಪರಿಶೀಲಿಸುವುವದರೊಂದಿಗೆ ಸಾರ್ವಜನಿಕರಿಗೆ ತೊಂದೆಯಾಗದಂತೆ ಕರ್ತವ್ಯ ನಿರ್ವಹಿಸಬೇಕು ಎಂದು ಹೇಳಿದ್ದಾರೆ.

ಚಿಕ್ಕಮಗಳೂರು ಜಿಲ್ಲೆಯ ಕೊಟ್ಟಿಗೆಹಾರ ಚೆಕ್ ಪೋಸ್ಟ್‌ನಲ್ಲಿ ದಾಖಲೆ ಇಲ್ಲದೆ ಸಾಗಿಸಲಾಗುತ್ತಿದ್ದ ೭೮ ಸಾವಿರ ನಗದನ್ನು ಪೋಲಿಸರು ವಶಕ್ಕೆ ಪಡೆದಿದ್ದಾರೆ. ಜಿಲ್ಲೆಯ ಎಲ್ಲಾ ಗಡಿಭಾಗದ ಚೆಕ್ ಪೋಸ್ಟ್‌ಗಳಲ್ಲಿ ಭದ್ರತೆ ಹೆಚ್ಚಿಸಲಾಗಿದೆ. ಜಿಲ್ಲಾ ಪೊಲೀಸ್ ಅಧೀಕ್ಷಕ ವಿಕ್ರಂ ಅಮಟೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

ಚುನಾವಣಾ ಆಯೋಗದ ಮಾರ್ಗಸೂಚಿಯಂತೆ ರಾಜಕೀಯ ಪಕ್ಷಗಳು ಮತ್ತು ಅಭ್ಯರ್ಥಿಗಳ ಚುನಾವಣಾ ಖರ್ಚು-ವೆಚ್ಚದ ಮೇಲೆ ನಿಗಾ ವಹಿಸಲಾಗಿದೆ ಎಂದು ಬೆಳಗಾವಿ ಜಿಲ್ಲಾ ಚುನಾವಣಾಧಿಕಾರಿ ನಿತೇಶ್ ಪಾಟೀಲ್ ತಿಳಿಸಿದ್ದಾರೆ.

ರಾಯಚೂರು ಜಿಲ್ಲೆಯ ಲೋಕಸಭಾ ಚುನಾವಣೆಯ ವೆಚ್ಚ ವೀಕ್ಷಕರಾಗಿ ಗುಂಜನಕುಮಾರ ವರ್ಮಾ ಜಿಲ್ಲೆಗೆ ಆಗಮಿಸಿದ್ದಾರೆ. ಸಾರ್ವಜನಿಕ ಭೇಟಿಗೆ ಅವಕಾಶ ಕಲ್ಪಿಸಲಾಗಿದೆ ಎಂದು ಜಿಲ್ಲಾ ಚುನಾವಣಾಧಿಕಾರಿ ಎಲ್.ಚಂದ್ರಶೇಖರ ನಾಯಕ ಅವರು ತಿಳಿಸಿದ್ದಾರೆ.

**<><*<><>*><>**

ಬಿಜೆಪಿ ಹಿರಿಯ ನಾಯಕ ಹಾಗೂ ಪ್ರಧಾನಿ ನರೇಂದ್ರ ಮೋದಿ ನಾಳೆ ಮಂಗಳೂರಿನಲ್ಲಿ ರೋಡ್ ಶೋ ನಡೆಸಲಿದ್ದಾರೆ. ಈ ಹಿನ್ನೆಲೆಯಲ್ಲಿ  ನಗರದಲ್ಲಿ ಸಂಚಾರ ವ್ಯವಸ್ಥೆಯಲ್ಲಿ ಬದಲಾವಣೆ ಮಾಡಿ ನಗರ ಪೊಲೀಸ್ ಆಯುಕ್ತ ಅನುಪಮ್ ಅಗರ್ ವಾಲ್ ಆದೇಶ ಹೊರಡಿಸಿದ್ದಾರೆ.  ಮಂಗಳೂರಿನ ಲೇಡಿಹಿಲ್ ಬಳಿಯ ಶ್ರೀ ನಾರಾಯಣಗುರು ವೃತ್ತದಿಂದ  ರಾಷ್ಟ್ರಕವಿ ಮಂಜೇಶ್ವರ ಗೋವಿಂದ ಪೈ  ವೃತ್ತದವರೆಗೆ ಸಂಜೆ ೬ ರಿಂದ ನಡೆಯಲಿರುವ ರೋಡ್ ಶೋ ನಲ್ಲಿ ಪ್ರಧಾನಿ ಭಾಗವಹಿಸಲಿದ್ದಾರೆ. ಭದ್ರತೆಯ ದೃಷ್ಟಿಯಿಂದ ನಾಳೆ ಮಧ್ಯಾಹ್ನ ೨ ಗಂಟೆಯಿಂದ ಪ್ರಧಾನಿ ಕಾರ್ಯಕ್ರಮ ಮುಗಿಯುವವರೆಗೆ ರೋಡ್ ಶೊ ನಡೆಯುವ ವ್ಯಾಪ್ತಿಯಲ್ಲಿ  ವಾಹನ ಸಂಚಾರ ನಿಷೇಧಿಸಲಾಗಿದೆ.  ವಾಹನಗಳ ಸಂಚಾರಕ್ಕಾಗಿ ಪರ್ಯಾಯ ವ್ಯವಸ್ಥೆಯನ್ನು ಮಾಡಲಾಗಿದ್ದು, ಸಾರ್ವಜನಿಕರು ಸಹಕರಿಸಬೇಕು ಎಂದು ಪೊಲೀಸ್ ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**<><*<><>*><>**

ಮುಖ್ಯಮಂತ್ರಿ ಸಿದ್ದರಾಮಯ್ಯ ಮೈಸೂರಿನ ವಿವಿಧೆಡೆ ಅಭ್ಯರ್ಥಿಗಳ ಪರ ಪ್ರಚಾರ ನಡೆಸಿದರು. ಇದೇ ವೇಳೆ ಎಕ್ಸ್ ಮೂಲಕ ಬಿಜೆಪಿ ವಿರುದ್ಧ ವಾಗ್ದಾಳಿ ನಡೆಸಿದ ಮುಖ್ಯಮಂತ್ರಿ, ಸ್ವಾತಂತ್ರ್ಯ ನಂತರ ದೇಶದ ಅಭಿವೃದ್ಧಿಗೆ ಅಡಿಪಾಯ ಹಾಕಿದ್ದು ಕಾಂಗ್ರೆಸ್. ಬಡತನ ನಿರ್ಮೂಲನೆಗೆ ಇಂದಿರಾಗಾಂಧಿಯವರು ೨೦ ಅಂಶಗಳ ಕಾರ್ಯಕ್ರಮಗಳನ್ನು ರೂಪಿಸಿ ಜಾರಿ ಮಾಡಿದ್ದರು. ಕೇವಲ ಶ್ರೀಮಂತರಿಗಾಗಿ ಕೆಲಸ ಮಾಡಿದ ನರೇಂದ್ರ ಮೋದಿ ಅವರು, ಬಡವರಿಗಾಗಿ, ಬಡತನ ಹೋಗಲಾಡಿಸಲು ಒಂದಂಶದ ಕಾರ್ಯಕ್ರಮವನ್ನೂ ಏಕೆ ಕೊಡಲಿಲ್ಲ ಎಂದು ಪ್ರಶ್ನಿಸಿದರು.

**<><*<><>*><>**

**ಈಗ ಉಡುಪಿ- ಚಿಕ್ಕಮಗಳೂರು ಲೋಕಸಭಾ ಕ್ಷೇತ್ರದ ವಿವರಗಳು :**

**ವರದಿಯನ್ನು ಸಿದ್ಧಪಡಿಸಿರುವವರು : ನಮ್ಮ ಜಿಲ್ಲಾ ಪ್ರತಿನಿಧಿ ಡಿ.ವಿ ಸಂಜಯ್**

ಉಡುಪಿ-ಚಿಕ್ಕಮಗಳೂರು ಲೋಕಸಭಾಕ್ಷೇತ್ರ ಕಾಫಿನಾಡು ಚಿಕ್ಕಮಗಳೂರು ಹಾಗೂ ಕಡಲತೀರ ಉಡುಪಿ ಜಿಲ್ಲೆಯನ್ನು ಒಳಗೊಂಡ ಕ್ಷೇತ್ರವಾಗಿದೆ. ಉಡುಪಿ ಜಿಲ್ಲೆಯ ಕುಂದಾಪುರ, ಉಡುಪಿ, ಕಾಪು, ಕಾರ್ಕಳ ಮತ್ತು ಚಿಕ್ಕಮಗಳೂರು ಜಿಲ್ಲೆಯ ಶೃಂಗೇರಿ, ಮೂಡಿಗೆರೆ, ಚಿಕ್ಕಮಗಳೂರು, ತರೀಕೆರೆ ಸೇರಿ ೮ ವಿಧಾನಸಭಾ ಕ್ಷೇತ್ರಗಳನ್ನು ಒಳಗೊಂಡಿದೆ. ಚಿಕ್ಕಮಗಳೂರು ಜಿಲ್ಲೆಯ ಕಡೂರು ವಿಧಾನಸಭಾ ಕ್ಷೇತ್ರವು ಹಾಸನ ಜಿಲ್ಲೆಗೆ ಸೇರಿದೆ. ಉಡುಪಿ-ಚಿಕ್ಕಮಗಳೂರು ಕ್ಷೇತ್ರದಲ್ಲಿ ೧೫ ಲಕ್ಷ ೮೫ ಸಾವಿರದ ೧೬೨ ಮತದಾರರಿದ್ದು ಎರಡು ಜಿಲ್ಲೆಯಿಂದ ಒಟ್ಟು ೭ ಲಕ್ಷ ೬೮ ಸಾವಿರದ ೨೧೫ ಪುರುಷ ಮತದಾರರು ಹಾಗೂ ೮ ಲಕ್ಷ ೧೬ ಸಾವಿರದ ೯೧೦ ಮಹಿಳಾ ಮತದಾರರಿದ್ದಾರೆ. ಉಡುಪಿ ಹಾಗೂ ಚಿಕ್ಕಮಗಳೂರು ಜಿಲ್ಲೆಯ ಚುನಾವಣಾಧಿಕಾರಿ ಶ್ರೀಮತಿ ಮೀನಾ ನಾಗರಾಜ್, ಉಡುಪಿ ಜಿಲ್ಲೆಯ ಚುನಾವಣಾಧಿಕಾರಿ ವಿದ್ಯಾಕುಮಾರಿ ಸಮನ್ವಯದಿಂದ ಕರ್ತವ್ಯ ನಿರ್ವಹಿಸುತ್ತಿದ್ದಾರೆ.

ಉಡುಪಿ-ಚಿಕ್ಕಮಗಳೂರು ಲೋಕಸಭಾ ಕ್ಷೇತ್ರಕ್ಕೆ ಮೊದಲ ಹಂತದಲ್ಲಿ ಇದೇ ೨೬ ಕ್ಕೆ ಮತದಾನ ನಡೆಯಲಿದ್ದು ಜೂನ್ ೪ರಂದು ಮತ ಎಣಿಕೆ ನಡೆಯಲಿದೆ.

ಬಿ.ಜೆ.ಪಿಯಿಂದ ಕೋಟಾ ಶ್ರೀನಿವಾಸ್ ಪೂಜಾರಿ, ಕಾಂಗ್ರೆಸ್ ಪಕ್ಷದಿಂದ ಜಯಪ್ರಕಾಶ್ ಹೆಗ್ಡೆ, ಬಿ.ಎಸ್.ಪಿ ಪಕ್ಷದಿಂದ ಕೆ.ಟಿ ರಾಧಕೃಷ್ಣ, ಕಣದಲ್ಲಿದ್ದಾರೆ.

ಈ ಚುನಾವಣೆಗೆ ಉಡುಪಿ ಜಿಲ್ಲೆಯಲ್ಲಿ ೮೬೬ ಹಾಗೂ ಚಿಕ್ಕಮಗಳೂರು ಜಿಲ್ಲೆಯಲ್ಲಿ ೯೭೬ ಮತಗಟ್ಟೆಗಳನ್ನು ತೆರೆಯಲಾಗಿದೆ. ಇವುಗಳಲ್ಲಿ ಕೆಲವು ಮತಗಟ್ಟೆಗಳನ್ನು ಸಖಿ ಮತಗಟ್ಟೆ, ವಿಕಲಚೇತನರ ಮತಗಟ್ಟೆ ಹಾಗೂ ಯುವ ಮತಗಟ್ಟೆಗಳನ್ನಾಗಿ ಮಾಡಲಾಗಿದೆ. ಎರಡು ಜಿಲ್ಲೆಗಳ ನಕ್ಸಲ್ ಪೀಡಿತ ಮತಗಟ್ಟೆ ವ್ಯಾಪ್ತಿಯಲ್ಲಿ ಕೇಂದ್ರ ಸಿ.ಆರ್.ಪಿ.ಅಫ್ ಪೊಲೀಸ್ ಪಡೆ ಹಾಗೂ ಸ್ಥಳೀಯ ಪೊಲೀಸರು ಬಿಗಿ ಭದ್ರತೆ ಕೈಗೊಂಡಿದ್ದಾರೆ. ಉಡುಪಿ ಜಿಲ್ಲೆಯಲ್ಲಿ ೧೪, ಚಿಕ್ಕಮಗಳೂರು ಜಿಲ್ಲೆಯಲ್ಲಿ ೨೨ ಚೆಕ್ ಪೋಸ್ಟ್‌ಗಳನ್ನು ತೆರೆಯಲಾಗಿದೆ. ವಾಹನಗಳ ತಪಾಸಣೆ, ವೀಡಿಯೋ ಚಿತ್ರೀಕರಣ ನಡೆಸಲಾಗುತ್ತಿದೆ. ಎರಡು ಜಿಲ್ಲೆಯಿಂದ ಒಟ್ಟು ೩೬೬ ಮತಗಟ್ಟೆಗಳನ್ನು ಸೂಕ್ಷ್ಮ ಮತಗಟ್ಟೆಗಳು ಎಂದು ಗುರುತಿಸಲಾಗಿದ್ದು ಹೆಚ್ಚಿನ ಭದ್ರತೆಯನ್ನು ನಿಯೋಜಿಸಲಾಗಿದೆ.

ಕಳೆದ ಲೋಕ ಸಭಾ ಚುನಾವಣೆಯಲ್ಲಿ ಶೇಕಡ ೭೪.೫೪ ರಷ್ಟು ಮತದಾನವಾಗಿದ್ದು, ಈ ಬಾರಿ ಶೇಕಡ ೯೦ ರಷ್ಟು ಮತದಾನವಾಗುವಂತೆ ಮಾಡಲು ಜಿಲ್ಲಾಡಳಿತ ಹಲವು ಕಾರ್ಯಕ್ರಮಗಳನ್ನು ಕೈಗೊಂಡಿದೆ. ಮತದಾನ ಪ್ರಮಾಣ ಹೆಚ್ಚಿಸಲು ಗ್ರಾಮ ಮತ್ತು ಅರಣ್ಯದಂಚಿನ ಪ್ರದೇಶಗಳಲ್ಲಿ ವಾಸಿಸುವವರಿಗೆ ಮತದಾನಕ್ಕೆ ವಾಹನಗಳ ವ್ಯವಸ್ಥೆ ಮಾಡಲಾಗುತ್ತಿದೆ. ಕಡಿಮೆ ಮತದಾನವಾದ ಮತಗಟ್ಟೆಗಳ ವ್ಯಾಪ್ತಿಯಲ್ಲಿ ಜಿಲ್ಲಾ ಸ್ವೀಪ್ ಸಮಿತಿಯಿಂದ ಜಾಗೃತಿ ಜಾಥ, ರಂಗೋಲಿ ಸ್ಪರ್ಧೆಗಳನ್ನು ನಡೆಸಲಾಗಿದೆ ಎಂದು ಜಿಲ್ಲಾಡಳಿತ ತಿಳಿಸಿದೆ.

ಇದೇ ತಿಂಗಳ ೨೬ ರಂದು ಮತದಾನ ಹಿನ್ನಲೆಯಲ್ಲಿ ಸಾರ್ವಜನಿಕರು ಕಡ್ಡಾಯವಾಗಿ ಮತದಾನ ಮಾಡುವ ಮೂಲಕ ಈ ಚುನಾವಣಾ ಹಬ್ಬದಲ್ಲಿ ಪಾಲ್ಗೊಳ್ಳುವಂತೆ ಚುನಾವಣಾ ಆಯೋಗ ಮನವಿ ಮಾಡಿದೆ.

**<><*<><>*><>**

ರಾಜ್ಯದೆಲ್ಲೆಡೆ ಇಂದು ದೇವರ ದಾಸಿಮಯ್ಯ ಅವರ ಜಯಂತಿ ಆಚರಿಸಲಾಯಿತು.

ದೇವರ ದಾಸಿಮಯ್ಯ ತಮ್ಮ ವಚನಗಳ ಮೂಲಕ ಲೋಕದ ಅಂಕುಡೊಂಕುಗಳನ್ನು ತಿದ್ದುವ ಕೆಲಸ ಮಾಡಿದ್ದು, ಅವರ ತತ್ವಾದರ್ಶ ಪ್ರತಿಯೊಬ್ಬರು ಜೀವನದಲ್ಲಿ ಅಳವಡಿಸಿಕೊಳ್ಳುವ ಮೂಲಕ ಸಮಾಜದಲ್ಲಿ ಉತ್ತಮ ನಾಗರಿಕರಾಗಬೇಕು ಎಂದು ರಾಯಚೂರು ತಹಶೀಲ್ದಾರ್ ಸುರೇಶ ವರ್ಮಾ ಹೇಳಿದ್ದಾರೆ.

ಹಾವೇರಿ ಜಿಲ್ಲಾಡಳಿತ ಭವನದಲ್ಲಿ ದೇವರ ದಾಸಿಮಯ್ಯ ಜಯಂತಿ ಆಚರಿಸಲಾಯಿತು. ಹೆಚ್ಚುವರಿ ಜಿಲ್ಲಾಧಿಕಾರಿ ಪೂಜಾರ ವೀರಮಲ್ಲಪ್ಪ, ದಾಸಿಮಯ್ಯ ಭಾವ ಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿದರು.

ಗದಗ ಜಿಲ್ಲಾಡಳಿತ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ದೇವರ ದಾಸಿಮಯ್ಯ ಜಯಂತ್ಯೋತ್ಸವವನ್ನು ಆಚರಿಸಲಾಯಿತು. ಅವರ ಭಾವಚಿತ್ರಕ್ಕೆ ಜಿಲ್ಲಾಧಿಕಾರಿ ವೈಶಾಲಿ.ಎಂ.ಎಲ್. ಪುಷ್ಪಾರ್ಚನೆ ನೆರವೇರಿಸಿ, ಗೌರವ ನಮನ ಸಲ್ಲಿಸಿದರು.

ಬೆಂಗಳೂರು ಗ್ರಾಮಾಂತರ ಜಿಲ್ಲೆಯ ವಿವಿಧೆಡೆ ದೇವರ ದಾಸಿಮಯ್ಯ ಜಯಂತಿ ಆಚರಿಸಲಾಯಿತು. ದೊಡ್ಡಬಳ್ಳಾಪುರದಲ್ಲಿ ದೇವರ ದಾಸಿಮಯ್ಯ ಭಾವಚಿತ್ರಕ್ಕೆ ತಹಶೀಲ್ದಾರ್ ವಿನೋದ್ ಕುಮಾರ್ ಪುಷ್ಪ ನಮನ ಸಲ್ಲಿಸಿದರು.

ಬೆಳಗಾವಿ ಜಿಲ್ಲಾಡಳಿತ, ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಕುಮಾರ ಗಂಧರ್ವ ಸಭಾ ಭವನದಲ್ಲಿ ದೇವರ ದಾಸಿಮಯ್ಯ ಜಯಂತಿಯನ್ನು ಆಚರಿಸಲಾಯಿತು. ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಉಪ ನಿರ್ದೇಶಕರಾದ ವಿದ್ಯಾವತಿ ಭಜಂತ್ರಿ ದೇವರದಾಸಿಮಯ್ಯ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿದರು.

ಶಾಂತಿ ಹಾಗೂ ಪ್ರೀತಿಯ ಸಂದೇಶ ಸಾರಿದ ದೇವರ ದಾಸಿಮಯ್ಯ ನಮ್ಮೆಲ್ಲರ ಬದುಕಿಗೆ ಮಾದರಿಯಾಗಿದ್ದಾರೆ ಎಂದು ಚಿತ್ರದುರ್ಗ ಜಿಲ್ಲೆಯ ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಹೇಳಿದರು.

ಸಮಾಜದಲ್ಲಿ ಮೌಢ್ಯದ ವಿರುದ್ಧ ಕ್ರಾಂತ್ರಿಕಾರಿ ಹೆಜ್ಜೆಗಳನ್ನಿಟ್ಟ ದೇವರ ದಾಸಿಮಯ್ಯನವರು ವೈಚಾರಿಕ ಚಿಂತನೆಗಳ ಮೂಲಕ ಜನರಿಗೆ ಅರಿವಿನ ದಾರಿ ತೋರಿದ್ದಾರೆ ಎಂದು ಯಾದಗಿರಿ ಜಿಲ್ಲಾಧಿಕಾರಿ ಡಾ.ಬಿ.ಸುಶೀಲಾ ಅಭಿಪ್ರಾಯಪಟ್ಟರು.

ಜಿಲ್ಲಾಡಳಿತ ಮತ್ತು ಕನ್ನಡ ಸಂಸ್ಕೃತಿ ಇಲಾಖೆಯ ಸಹಯೋಗದಲ್ಲಿ ಇಂದು ಉತ್ತರಕನ್ನಡ ಜಿಲ್ಲೆಯ ಕಾರವಾರದಲ್ಲಿ ದೇವರ ದಾಸಿಮಯ್ಯ ಜಯಂತಿ ಆಚರಿಸಲಾಯಿತು.

**<><*<><>*><>**

ಚಿಕ್ಕಬಳ್ಳಾಪುರ ನಗರಸಭೆ ವ್ಯಾಪ್ತಿಯ ಆಸ್ತಿ ತೆರಿಗೆದಾರರು ೨೦೨೪-೨೫ ನೇ ಸಾಲಿನ ಆಸ್ತಿ ತೆರಿಗೆಯನ್ನು ಇದೇ ೩೦ ರ ಒಳಗಾಗಿ ಪಾವತಿಸಿ ಆಸ್ತಿ ತೆರಿಗೆಯ ಮೇಲೆ ಶೇಕಡ ೫ ರಷ್ಟು ರಿಯಾಯಿತಿ ಪಡೆಯಲು ಅವಕಾಶ ಮಾಡಿಕೊಡಲಾಗಿದೆ ಎಂದು ನಗರಸಭೆಯ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಮೇ ೧ ರಿಂದ ಜೂನ್ ೩೦ ರೊಳಗೆ ಯಾವುದೇ ದಂಡ ಶುಲ್ಕವಿಲ್ಲದೆ ಆಸ್ತಿ ತೆರಿಗೆ ಪಾವತಿಸಲು ಅವಕಾಶ ನೀಡಲಾಗಿದೆ. ಜುಲೈ ೧ ರ ನಂತರ ಆಸ್ತಿ ತೆರಿಗೆ ಪಾವತಿಸಿದಲ್ಲಿ ಶೇಕಡ ೨ ರಷ್ಟು ದಂಡ ಪಾವತಿಸಬೇಕಾಗುತ್ತದೆ. ನಗರದ ಸಾರ್ವಜನಿಕರು ಈ ಆಸ್ತಿ ತೆರಿಗೆ ರಿಯಾಯಿತಿ ಅವಕಾಶವನ್ನು ಸದುಪಯೋಗಪಡಿಸಿಕೊಂಡು ಚಿಕ್ಕಬಳ್ಳಾಪುರ ನಗರದ ಸರ್ವತೋಮುಖ ಅಭಿವೃದ್ಧಿಗೆ ಸಹಕರಿಸಬೇಕೆಂದು ಪೌರಾಯುಕ್ತರು ಪ್ರಕಟಣೆಯಲ್ಲಿ ಮನವಿ ಮಾಡಿದ್ದಾರೆ.

**<><*<><>*><>**

ಇನ್ನು ಹವಾವರ್ತಮಾನ

ಉತ್ತರ ಒಳನಾಡಿನ ಕೆಲವು ಸ್ಥಳಗಳಲ್ಲಿ ಹಾಗೂ ಕರಾವಳಿ ಮತ್ತು ದಕ್ಷಿಣ ಒಳನಾಡಿನ ಒಂದೆರಡು ಸ್ಥಳಗಳಲ್ಲಿ ಮಳೆಯಾಗಿದೆ ಎಂದು ಹವಾಮಾನ ಇಲಾಖೆ ತಿಳಿಸಿದೆ.

ರಾಜ್ಯದಲ್ಲಿ ಗರಿಷ್ಠ ಉಷ್ಣಾಂಶ ೩೮.೭ ಡಿಗ್ರಿ ಸೆಲ್ಸಿಯೆಸ್ ಬಾಗಲಕೋಟೆಯಲ್ಲಿ ದಾಖಲಾಗಿದೆ.

ದಕ್ಷಿಣ ಕನ್ನಡ, ಉಡುಪಿ, ಉತ್ತರ ಕನ್ನಡ, ಬೀದರ್, ಬೆಳಗಾವಿ, ಧಾರವಾಡ, ಗದಗ ಸೇರಿದಂತೆ ರಾಜ್ಯದ ಹಲವೆಡೆ ಹಗುರ ಮಳೆಯಾಗುವ ಸಾಧ್ಯತೆಯಿದೆ. ಉಳಿದಂತೆ ಹಲವೆಡೆ ಒಣಹವೆ ಮುಂದುವರೆಯುವ ಸಾಧ್ಯತೆಯಿದೆ.

ಬೆಂಗಳೂರು ಮತ್ತು ಸುತ್ತಮುತ್ತ ಮೋಡ ಕವಿದ ವಾತಾವರಣ. ಗರಿಷ್ಠ ಉಷ್ಣಾಂಶ ೩೫ ಮತ್ತು ಕನಿಷ್ಠ ೨೨ ಡಿಗ್ರಿ ಸೆಲ್ಸಿಯಸ್‌ನಷ್ಟು ತಾಪಮಾನ ನಿರೀಕ್ಷಿತ.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೭.೩೫ ಕ್ಕೆ <><*<>**